ದಿನಾಂಕಃ **23-01-2023**

ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು.

<u>ಮುಂದುವರೆದ ಪಾಟೀ ಸವಾಲುಃ ವಾದಿ ಪರ ಶ್ರೀ ಕೆಯು ವಕೀಲರಿಂದಃ</u>

ನಾನು ಹಾಜರುಪಡಿಸಿದ ನಿಡಿ-103 ರಿಂದ 111 ದಾಖಲೆಗಳು ವಾದಿ ಹಾಗೂ ಆತನ ತಂದೆಯ ಸ್ವಯಾರ್ಜಿತವಾಗಿ ಖರೀದಿ ಮಾಡಿರುವ ಆಸ್ತಿಗೆ ಸಂಬಂಧಪಟ್ಟ ದಾಖಲೆಗಳು ಎಂದರೆ ಸಾಕ್ಷಿಯು ನನ್ನ ಅಜ್ಜಿಯ ಆಸ್ತಿಯ ಮೇಲೆ ಅಜ್ಜಯ್ಯನಪಾಳ್ಯಾದಲ್ಲಿ ಇದ್ದರು ಎಂದು ನನ್ನ ಅಜ್ಜಿ ಹೇಳುತ್ತಿದ್ದರು. ಸದರಿ ಸ್ವತ್ತುಗಳು ನನ್ನ ಅಜ್ಜ ಕೃಷ್ಣಪ್ಪನಿಗೆ ಸಂಬಂಧಪಟ್ಟಿಲ್ಲ ಎಂದರೆ ಸರಿ. ದೊಡ್ಡರಂಗಪ್ಪ , ಲಕ್ಕಮ್ಮ ಮೃತ ಪಟ್ಟು 40-50 ವರ್ಷಗಳು ಆಗಿದೆ ಎಂದರೆ ನನಗೆ ಗೊತ್ತಿಲ್ಲ , ನಾನು ಅವರನ್ನು ನೋಡಿದ್ದೇನೆ ಎಂದು ಸಾಕ್ಷಿಯು ನುಡಿಯುತ್ತಾರೆ. ಆಗ ನನಗೆ 10-11 ವರ್ಷ ಇರಬಹುದು. ಆಗ ಅವರಿಗೆ ಎಷ್ಟು ವಯಸ್ಸಾಗಿತ್ತು ಅಂದಾಜುಮಾಡಲಾಗುವುದಿಲ್ಲ. ಆಗ ಅವರಿಗೆ ಮಕ್ಕಳು-ಮೊಮ್ಮಕ್ಕಳು ಇದ್ದರು ಎಂದರೆ ಸರಿ. ದೊಡ್ಡರಂಗಪ್ಪ ಮತ್ತು ಅವರ ಮಕ್ಕಳಿಗೆ ದಾವಾ ಸ್ವತ್ತಿನಲ್ಲಿ ಯಾವ ಹಕ್ಕು ಇಲ್ಲ ಎಂದರೆ ನನಗೆ ಗೊತ್ತಿಲ್ಲ. ಅವರು ದಾವಾ ಸ್ವತ್ತಿನ ಸ್ವಾಧೀನದಲ್ಲಿ ಯಾವತ್ತೂ ಇರಲಿಲ್ಲ ಎಂದರೆ ನನಗೆ ಗೊತ್ತಿಲ್ಲ.

ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರದಲ್ಲಿರುವ ಅಂಶಗಳನ್ನು ಲಿಖಿತ ಹೇಳಿಕೆಯಲ್ಲಿ ಬರೆಸಿಲ್ಲ ಎಂದರೆ ನನಗೆ ಗೊತ್ತಿಲ್ಲ. ವಾದಿಯ ಭಾಗವನ್ನು ಲಪಟಾಯಿಸಲು ಸ್ವತ್ತಿನ ದಾಖಲೆಗಳನ್ನು ಸೃಷ್ಟಿಮಾಡಿದ್ದೇವೆ ಎಂದರೆ ಸರಿಯಲ್ಲ. ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ, ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯಾದಲ್ಲಿ ಸಾಕ್ಷಿಯ ಹೇಳಿಕೆಯಂತೆ ಕಂಪ್ಯೂಟರೀಕರಣಗೊಳಿಸಿ ಪ್ರಿಂಟ್ ತೆಗೆಯಲಾಯಿತು.)

ಓ. ಹೇ. ಕೇ. ಸರಿ. ಇದೆ.

ಅಧಿಕ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಮ್.ಎಫ್.ಸಿ. ಶಿರಾ.